## 2 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು

## MVC. No. 950 /2025

ಆರ್.ಡಬ್ಲ್ಯೂ. 1

ದಿನಾಂಕಃ 09.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಎದುರುದಾರರ ಪರ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ನಾನೇ ಹೇಳಿ ಬರೆಸಿ ಸಹಿ ಮಾಡಿರುತ್ತೇನೆ.

**ಪಾಟೀ ಸವಾಲುಃ ಅರ್ಜಿದಾರರ ಪರವಾಗಿಃ ಶ್ರೀಹೆಚ್.ವಿ.ಎಂ ವಕೀಲರಿಂದಃ**

ನಮ್ಮ ಹಿರಿಯ ಅಧಿಕಾರಿಗಳಿಂದ ನಾನು ಒಪ್ಪಿಗೆ ಪಡೆದುಕೊಂಡು ಸಾಕ್ಷಿ ಹೇಳಲು ಬಂದಿದ್ದೇನೆ. ಅಪಘಾತವಾದ ಬಗ್ಗೆ ನಾನೇ ಪೋಲೀಸ್ ಠಾಣೆಗೆ ಪೋನ್ ಮಾಡಿ ಹೇಳಿರುತ್ತೇನೆ, ಆದರೆ ಬರವಣಿಗೆಯಲ್ಲಿ ದೂರನ್ನು ಕೊಟ್ಟಿರುವುದಿಲ್ಲ. ಕಾರಿನ ಚಾಲಕನ ತಪ್ಪಿದಿಂದ ಅಪಘಾತವಾಗಿದೆ ಎಂದು ನನ್ನ ಪ್ರಮಾಣ ಪತ್ರದಲ್ಲಿ ಹೇಳಿದ್ದು ಕಾರಿನ ಚಾಲಕನ ಮೇಲೆ ನಾನು ಯಾವುದೇ ದೂರನ್ನು ಕೊಟ್ಟಿರುವುದಿಲ್ಲ. ಪೋಲೀಸರು ನನ್ನ ವಿರುದ ಹಾಕಿದ್ದ ಚಾರ್ಜ್ ಶೀಟ್ ನ್ನು ನಾನು ಪ್ರಶ್ನಿಸಿರುವುದಿಲ್ಲ. ಅಪಘಾತವು ನನ್ನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಕೊಡಬೇಕಾಗುತ್ತದೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

2 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು

**1 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು**

MVC. No. 781/2021

ಪಿ.ಡಬ್ಲ್ಯೂ. 1

ದಿನಾಂಕಃ07.11.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಎದುರುದಾರರು ಗೈರು ಹಾಜರಿದ್ದು ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು**

ಮರುವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನದಂತೆ  ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

**1** ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು